# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:103 RNI NO.KAR KAN/2003/10452:No./PMG/KA/NK/BM/743/24-26 ಶುಕ್ರವಾರ ದಿನಾಂಕ: 15-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2

## 67.50 ಕೋಟಿ ರೂ.ಗಳ ವೆಚ್ಚದಲ್ಲಿ ಆಗ್ರಿ ಇನ್ನೋವೇಷನ್ ಸೆಂಟರ್ ಸ್ಥಾಪಿಸಲು ನಿರ್ಧಾರ

ಬೆಂಗಳೂರು ; ಕೃಷಿ ಕ್ಷೇತ್ರದಲ್ಲಿ ರೈತರ ಉತ್ಪಾದನೆ ಹೆಚ್ಚಾಗಲು ಹೊಸ ತಂತ್ರಜ್ಞಾನ ತರಲು ನವೋದ್ಯಮವನ್ನು ಪ್ರೋತ್ಸಾಹಿಸಬೇಕು. ಅಗ್ರೀ ಬಯೋ ಟೆಕ್ ಸಂಸ್ಥೆಗಳನ್ನು ರೈತರಿಗೆ ತಲುಪಿಸಲು , ಉತ್ಪಾದಕತೆ ಹೆಚ್ಚಿಸಲು, ಬೆಳೆ ಸಂರಕ್ಷಣೆಗಾಗಿ ಹೊಸ ನವೋದ್ಯಮಗಳನ್ನು ಪ್ರೋತ್ಸಾಹಿಸಲು 'ಆಗ್ರಿ ಇನ್ನೋವೇಷನ್ ಸೆಂಟರ್ ನ್ನು ' 67.50 ಕೋಟಿ ರೂ.ಗಳ ವೆಚ್ಚದಲ್ಲಿ ಸ್ಥಾಪಿಸಲು ಜೈವಿಕ ತಂತ್ರಜ್ಞಾನ ಇಲಾಖೆ ವತಿಯಿಂದ ಇದನ್ನು ಸ್ಥಾಪಿಸಲು ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

ಪೋಲೀಸ್ ನೇಕಾತಿ ಹಗರಣ: ಹೆಚ್ಚಿನ ತನಿಖೆಗೆ ಎಸ್.ಐ.ಟಿ ರಚನೆ*ಪೋಲೀಸ್ ನೇಮಕಾತಿ ಹಗರಣದ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳು ಬಿ.ವೀರಪ್ಪ ಅವರ ನೇತೃತ್ವದ ಸಮಿತಿ ತನಿಖೆ ನಡೆಸಿ ವರದಿ ಸಲ್ಲಿಸಿದ್ದಾರೆ. ಅದರಲ್ಲಿ ಸರ್ಕಾರಿ ನೌಕರರೂ ಸೇರಿ ಖಾಸಗಿಯವರು, ಮಧ್ಯವರ್ತಿಗಳು ಸೇರಿ 113 ಜನರು ಇದರಲ್ಲಿ ಶಾಮೀಲಾಗಿದ್ದಾರೆ ಎಂದು ವರದಿಯಲ್ಲಿ ತಿಳಿಸಿದ್ದಾರೆ. ಸಿಐಡಿಯವರು 17 ಪ್ರಕರಣಗಳ ತನಿಖೆಯನ್ನು ಮಾಡುತ್ತಿದ್ದಾರೆ. ಆಯೋಗದ ಮುಂದೆ ಕೆಲವರು ಮಾಹಿತಿ ನೀಡಿಲ್ಲ. ಅಂಥವರ ಬಳಿ ಮಾಹಿತಿಯನ್ನು ಇತರೆ ತನಿಖೆ ಮೂಲಕ ಪಡೆಯಬೇಕಿದ್ದು, ತಪ್ಪುಗಳಾಗಿರುವ ಬಗ್ಗೆ ಇನ್ನಷ್ಟು ತನಿಖೆ ಕೈಗೊಳ್ಳಲು ಎಸ್.ಐ.ಟಿಗೆ ವಹಿಸಬೇಕೆಂಬ ನ್ಯಾಯಮೂರ್ತಿಗಳ ಶಿಫಾರಸ್ಸಿನ ಹಿನ್ನೆಲೆಯಲ್ಲಿ ಎಸ್.ಐ.ಟಿ ರಚನೆಗೂ ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ನಿವೇಶನ ಹಂಚಿಕೆಯಾದವರಿಗೆ ಕಂತು ಕಟ್ಟಲು 3 ತಿಂಗಳ ಅವಕಾಶ*ಬೆಂಗಳೂರಿನಲ್ಲಿ ಕೆಂಪೇಗೌಡ ಬಡಾವಣೆ ಹಾಗೂ ಅಂತಹ ಬಡಾವಣೆಗಳಲ್ಲಿ 2016 –2018 ರ ಅವಧಿಯಲ್ಲಿ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ. ಅವುಗಳನ್ನು ಲೀಸ್ ಕಂ ಸೇಲ್ ಆಧಾರದ ಮೇಲೆ ಹಂಚಿಕೆ ಮಾಡಲಾಗಿದೆ. ಕೆಲವರು ಕಂತಿನ ಪ್ರಕಾರ ಹಣ ಪಾವತಿಸಿ ಲೀಸ್ ಕಂ ಸೇಲ್ ಡೀಡ್ ಮಾಡಿಕೊಂಡಿದ್ದಾರೆ. ಕೆಲವರು ಸಮಯಕ್ಕೆ ಕಂತು ಕಟ್ಟಲು ಸಾಧ್ಯವಾಗದೇ ಇನ್ನೊಂದು ಅವಕಾಶ ಕೊಡಲು ಮನವಿ ಮಾಡಿಕೊಂಡಿದ್ದಾರೆ. ಅವರಿಗೆ ಹಣ ಕಟ್ಟಲು ಮೂರು ತಿಂಗಳ ಅವಕಾಶವನ್ನು ಕೊಟ್ಟು ಬಾಕಿ ಹಣ ಹಾಗೂ 12% ಬಡ್ಡಿಯೊಂದಿಗೆ ಪಾವತಿಸಿ ಲೀಸ್ ಕಂ ಸೇಲ್ ಡೀಡ್ ಮಾಡಿಸಿಕೊಳ್ಳಲು ಅವಲಾಶ ಕಲ್ಪಿಸಲು ಸಚಿವ ಸಂಪುಟ ತೀರ್ಮಾನ ಮಾಡಿದೆ.

ರಸ್ತೆ ಅಗಲೀಕರಣ: ಟಿ.ಡಿ.ಆರ್ ಕೊಡಲು ತೀರ್ಮಾನ* ಅರಮನೆಯ ಒಳಗೆ ಕಾಂಪೌಂಡ್ ಹಾಕಲಾಗಿದೆ. ಅರಮನೆ ಹೊರಗಿನ ಜಾಗವನ್ನು ರಸ್ತೆ ಅಗಲೀಕರಣಕ್ಕೆ ಸ್ವಾಧೀನ ಪಡಿಸಿಕೊಳ್ಳುವ ಬಗ್ಗೆ ಸರ್ವೋಚ್ಚ ನ್ಯಾಯಾಲಯದಲ್ಲಿ ನ್ಯಾಯಾಂಗ ನಿಂದನೆ ಪ್ರಕರಣ ನಡೆಯುತ್ತಿದ್ದು ರಾಜ್ಯದ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಬಿಬಿಎಂಪಿ ಆಯುಕ್ತರು ಖುದ್ದಾಗಿ ಹಾಜರಾಗುವಂತೆ ಸೂಚಿಸಲಾಗಿದೆ. ಮುಂದಿನ ವಾರ ಪ್ರಕರಣವಿದ್ದು ಸರ್ವೋಚ್ಚ ನ್ಯಾಯಾಲಯವು ರಸ್ತೆ ಅಗಲೀಕರಣ ಮಾಡುವುದಾದರೆ ಟಿ.ಡಿ.ಆರ್ ಕೊಟ್ಟು ಸ್ವಾಧೀನ ಮಢಿಕೊಳ್ಳಬೇಕೆಂದು ಸರ್ವೋಚ್ಚ ನ್ಯಾಯಾಲಯ ಸೂಚಿಸಿದೆ. ಹಿಂದಿನ ಸರ್ಕಾರ ರಸ್ತೆ ಅಗಲೀಕರಣ ಮಾಡುವ ಅವಶ್ಯಕತೆ ಇಲ್ಲ ಎಂದು ತೀರ್ಮಾನಿಸಿತ್ತು. ನಂತರ ಅವರು ಪುನ: ನ್ಯಾಯಾಲಯಕ್ಕೆ ಹೋಗಿ ಈಗ ರಸ್ತೆ ಅಗಲೀಕರಣ ಬೇಡ ಎನ್ನುತ್ತಿದ್ದಾರೆ. ಆದರೆ 2016 ನಲ್ಲಿಯೇ ಒಳಗಡೆ ಕಾಂಪೌಂಡ್ ಕಟ್ಟಿದ್ದಾರೆ. ಆದ್ದರಿಂದ ನಮ್ಮ ಕೈವಶದಿಂದ ತಪ್ಪಿಹೋಗಿದೆ.

(2 ನೇ ಪುಟಕ್ಕೆ)

## ರೌಡಿ ಪ್ರವೃತ್ತಿಯನ್ನು ಹೊಂದಿರುವ ರೌಡಿ ಶೀಟರ್‌ಗಳಿಗೆ ಖಡಕ್ ವಾರ್ನಿಂಗ್ ನೀಡಿದ ಆಡಿಷನಲ್ ಎಸ್ಪಿ ರವಿಕುಮಾರ್!!



ಬಳ್ಳಾರಿ(14) : ನಗರದ ಪೋಲಿಸ್ ಗ್ರೌಂಡ್ ನಲ್ಲಿ ಗುರುವಾರ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರೌಡಿಶೀಟರ್ ಗಳಿಗೆ ತಿಳುವಳಿಕೆ ನೀಡಿದರು, ಲೋಕಸಭಾ ಚುನಾವಣೆ ಸಂದರ್ಭದಲ್ಲಿ, ಅಕ್ರಮ ಚಟುವಟಿಕೆಗಳಲ್ಲಿ ತೊಡಗುವುದು, ಮತದಾರರ ಗೆ ಬೆದರಿಕೆ, ಆಮಿಷ ಒಡ್ಡುವುದು ತೊಂದರೆ ಕೊಡುವುದು, ಪ್ರಭಾವಿ ಬೀರುವುದು, ಕಾನೂನು ಪ್ರಕಾರ ಅಪರಾಧ. ಪಾರದರ್ಶಕ, ಶಾಂತಿ ಮತ್ತು ಸುವ್ಯವಸ್ಥೆ ಚುನಾವಣೆ ಗೆ ಭಂಗವುಂಟು ಮಾಡಿದರೆ,ರೌಡಿ ಶೀಟರ್ ಗಳನ್ನು, ಗಡಿಪಾರು, ಮಾಡಲಾಗುವುದು, ಎಂದು ಎಚ್ಚರಿಕೆ ನೀಡಿದರು.ಅಪರಿಚಿತ ವ್ಯಕ್ತಿಗಳು ಯಾರಾದರು ಬಂದರೆ ಮಾಹಿತಿ ಕೊಡಬೇಕು ಎಂದರು. ಈವರೆಗೆ ಏನು ಆಗಿದೆ ಎಂದು ನಮಗೆ ಅವಶ್ಯಕತೆ ಇಲ್ಲ, ಇನ್ನುಮುಂದೆ ಅದು ನಡೆಯ ಬಾರದು ಎಂದು, ಪೋಲಿಸ್ ಅಧಿಕಾರಿಗಳು ಖಡಕ್ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ, ನಗರ ಡಿ.ವೈ ಎಸ್ಪಿ,ಚಂದ್ರ ಕಾಂತ್ ನಂದ ರೆಡ್ಡಿ, ಮಲ್ಲಿಕಾರ್ಜುನ ಸಿಂಧೂರ. ಮತ್ತಿತರ ಪೋಲಿಸ್ ಅಧಿಕಾರಿಗಳು ಉಪಸ್ಥಿತಿ ಇದ್ದರು.

### ಪೊಲೀಸ ಇಲಾಖೆಯ ಕಣ್ಗಾವಲು ವ್ಯವಸ್ಥೆಗೆ ಸಚಿವ ಎಚ್.ಕೆ.ಪಾಟೀಲ ಚಾಲನೆ

## ಸಾರ್ವಜನಿಕರ ಆಸ್ತಿ ರಕ್ಷಣೆಯಲ್ಲಿ ಇಲಾಖೆಯ ದಿಟ್ಟ ಹೆಜ್ಜೆ

ಗದಗ ಮಾರ್ಚ 14: ರಾಜ್ಯದಲ್ಲಿಯೇ ಗದಗ ಜಿಲ್ಲೆಯಲ್ಲಿ ಕಣ್ಗಾವಲು ವ್ಯವಸ್ಥೆಯನ್ನು ಮೊಟ್ಟಮೊದಲ ಬಾರಿಗೆ ಜಾರಿಗೊಳಿಸಿ ಜನರನ್ನು ಮತ್ತು ಜನರ ಆಸ್ತಿಯನ್ನು ರಕ್ಷಿಸುವಲ್ಲಿ ಪೊಲೀಸ ಇಲಾಖೆ ದಿಟ್ಟ ನಿರ್ಧಾರ ತೆಗೆದುಕೊಂಡಿದೆ ಎಂದು



ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ಹೇಳಿದರು. ನಗರದ ಶಹರ ಪೊಲೀಸ್ ಠಾಣೆ ಆವರಣದಲ್ಲಿ ಗುರುವಾರ ಕೀಲಿ ಹಾಕಿದ ಮನೆಗಳ ಕಣ್ಗಾವಲು ವ್ಯವಸ್ಥೆ ಹಾಗೂ ಪೊಲೀಸ್ ಜಾಗೃತಿ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಮನೆಗಳ್ಳತನ ತಡೆಯುವುದಕ್ಕೆ ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿಗೆ ಕಣ್ಗಾವಲು ವ್ಯವಸ್ಥೆ ಆರಂಭಿಸಿ ಜನರ ಆಸ್ತಿಯನ್ನು ಸಂರಕ್ಷಿಸಿ ಕಳ್ಳತನ ಮಾಡುವರಿಗೆ ತಕ್ಕ ಶಾಸ್ತಿ ಮಾಡುವ ಯೋಜನೆ ಜಾರಿಗೊಳಿಸಲಾಗಿದೆ ಎಂದರು.

ಪೊಲೀಸ್ ಇಲಾಖೆ ಅತ್ಯಂತ ಕಾಳಜಿ ವಹಿಸಿ ಗಂಭೀರವಾಗಿ ಕಾರ್ಯ ಪ್ರವೃತ್ತರಾಗಿದ್ದು ಈಗಾಗಲೇ ಯೋಜನೆಗೆ ಬೇಕಾದ ಅಗತ್ಯ ಉಪಕರಣಗಳನ್ನು ಒದಗಿಸಲು ಪ್ರಾರಂಭಿಸಲಾಗಿದೆ ಎಂದು ಅವರು ಹೇಳಿದರು. ಜಿಲ್ಲಾ ಪೊಲೀಸ ಇಲಾಖೆಯಿಂದ ಈಗಾಗಲೇ ಥರ್ಡ ಐ ಯೋಜನೆ ಜಾರಿಗೊಳಿಸುವ ಮೂಲಕ ಜನಸಾಮಾನ್ಯರು ಸಂಚಾರಿ ನಿಯಮಗಳನ್ನು ಸರಿಯಾಗಿ ಪಾಲಿಸುವಂತೆ ಜಾಗೃತಿ ಮೂಡಿಸಿ ಅನುಷ್ಟಾನಗೊಳಿಸಲಾಗುತ್ತಿದೆ. ಥರ್ಡ ಐ ಜಾರಿಯಿಂದ ಕಾನೂನು ಸುವ್ಯವಸ್ಥೆ ಸರಿಯಾದ ಕ್ರಮದಲ್ಲಿ ಸಾಗುತ್ತಿದ್ದು ಪ್ರಕರಣಗಳನ್ನು ಕಂಡು ಹಿಡಿಯಲು ಥರ್ಡ ಐ ಸಹಕಾರಿಯಾಗಿದೆ ಎಂದರು. ನಗರದ ಜನನಿಬಿಡ ಹೊಸ ಬಡಾವಣೆಗಳಲ್ಲಿ ಮನೆಗಳಗಳತನ ಪ್ರಕರಣಗಳ ತಡೆಗೆ ಈ ಕಣ್ಗಾವಲು ವ್ಯವಸ್ಥೆ ಅತ್ಯಂತ ಸಹಕಾರಿಯಾಗಿದೆ. ಜನಸಮಾನ್ಯರ ಮನೆ ಹಾಗೂ ಆಸ್ತಿ ರಕ್ಷಣೆ ಮಾಡುವ ಕಾರ್ಯದಲ್ಲಿ ಪೊಲೀಸ ಇಲಾಖೆ ಈ ಕಣ್ಗಾವಲು ವ್ಯವಸ್ಥೆ ಮೂಲಕವೂ ಮಾಡಬಹುದಾಗಿದೆ. (2 ನೇ ಪುಟಕ್ಕೆ)

## ಬಿಜೆಪಿ 200 ಸ್ಥಾನ ಗೆಲ್ಲುವುದಿಲ್ಲ : ಸಚಿವ ಸಂತೋಷ್ ಲಾಡ್

ಬೆಂಗಳೂರು,ಮಾ.14– ಬಿಜೆಪಿಗೆ ಈ ಬಾರಿ ಜನರೇ ಕಡಿವಾಣ ಹಾಕುತ್ತಾರೆ. ಕಳೆದ ಬಾರಿ ಶೇ.39 ರಷ್ಟು ಮತ ಪಡೆದಿದ್ದು, ಈ ಬಾರಿ ಅದು ಶೇ.32 ಕ್ಕೆ ಕುಸಿಯಲಿದೆ. 200 ಸ್ಥಾನಗಳ ಮೇಲೆ ಬಿಜೆಪಿ ಗೆಲ್ಲುವುದಿಲ್ಲ ಎಂಬ ವರದಿ ಇದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದರು.'ವಿಧಾನಸೌಧದ ಬಳಿ ಸುದ್ದಿಗಾರ ರೊಂದಿಗೆ ಮಾತ ನಾಡಿದ ಅವರು, ಬಿಜೆಪಿಯನ್ನು ಸೋಲಿಸಲು ಜನ ನಿರ್ಧರಿಸಿದ್ದಾರೆ. ಬೆಲೆ ಏರಿಕೆ ಸೇರಿದಂತೆ ಹಲವು ಸಮಸ್ಯೆ ಗಳಿಂದ ಜನಸಾಮಾನ್ಯರು ಆಕ್ರೋ ಶಗೊಂಡಿದ್ದಾರೆ. ಭಾವನಾತ್ಮಕ ವಿಚಾರಗಳಿಗೆ ಒತ್ತು ನೀಡುವುದಷ್ಟೇ ಬಿಜೆಪಿ ಆದ್ಯತೆ. ಅದರ ಹಿಂದಿನ ಹುನ್ನಾರವನ್ನು ಮತದಾರರು ಅರ್ಥ ಮಾಡಿಕೊಂಡಿದ್ದಾರೆ ಎಂದರು. ಮೈಸೂರಿನ ಸಂಸದ ಪ್ರತಾಪ್ ಸಿಂಹ ಅವ ರಿಗೆ ಬಿಜೆಪಿ ಟಿಕೆಟ್ ನಿರಾಕರಿಸಿರುವುದು ನನಗೆ ವೈಯಕ್ತಿಕ ವಾಗಿ ಬೇಸರ ಮೂಡಿಸಿದೆ. ಪಕ್ಷ ಮತ್ತು ರಾಜಕಾರಣ ಹೊರತಾಗಿ ಆತ ನನಗೆ ಉತ್ತಮ ಸ್ನೇಹಿತ. ಪ್ರತಾಪ್ ಸಿಂಹ ಅವರಿಗೆ ಒಳ್ಳೆಯದಾಗಲಿ ಎಂದರು. ಬಿಜೆಪಿ ಗಾಗಿ ಸಾಕಷ್ಟು ಹೋರಾಟ ನಡೆಸಿದರು. ಸಿದ್ದರಾಮಯ್ಯ ಅವರನ್ನು ಟೀಕೆ ಮಾ ಡಿದರೆ ಟಿಕೆಟ್ ಸಿಗುತ್ತದೆ ಎಂದು ನಂಬಿಕೊಂಡಿದ್ದರು. ಈಗ ಅವಕಾಶ ತಪ್ಪಿ ಹೋಗಿರುವುದು ಪಾಪ ಅನುಕಂಪ ವ್ಯಕ್ತಪಡಿಸಿದರು.

## ಮೋದಿಯನ್ನು ಬೆಂಬಲಿಸುವಂತೆ ರಾಜ್ಯ ಓ.ಬಿ.ಸಿ ಮೋರ್ಚಾ ಅಧ್ಯಕ್ಷರಾದ ರಘು ಕೌಟಿಲ್ಯ ಕರೆ

ಬೆಳಗಾವಿ: ಭಾರತೀಯ ಜನತಾ ಪಾರ್ಟಿ ಬೆಳಗಾವಿ ವತಿಯಿಂದ ಬೆಳಗಾವಿಯ ಸರ್ಕಿಟ್ ಹೌಸ್ ದಲ್ಲಿ ಮಾಧ್ಯಮ ಗೋಷ್ಠಿ ಏರ್ಪಡಿಸಲಾದ ಮಾಧ್ಯಮ ಗೋಷ್ಠಿಯಲ್ಲಿ ರಾಜ್ಯ ಓ.ಬಿ.ಸಿ ಮೋರ್ಚಾ ಅಧ್ಯಕ್ಷರಾದ ರಘು ಕೌಟಿಲ್ಯ ಮಾತನಾಡುತ್ತಾ ಅಂಬಿಗರ ಚೌಡಯ್ಯ ನಿಗಮದ ಕೋಳಿ ಸಮಾಜ ,ಗಂಗಾಮತಸ್ಥ ಸಮಾಜ ಅವರಿಗೆ 25 ಕೋಟಿ ಹಣ ನಮ್ಮ ಸರ್ಕಾರ ಕೊಟ್ಟಿದೆ ಕಾಂಗ್ರೆಸ ಸರ್ಕಾರ ಕೇವಲ 9 ಕೋಟಿ ಕೊಟ್ಟಿದೆ, ಉಪ್ಪಾರ ಅಬಿ. ವೃದ್ಧಿ ನಿಗಮಕ್ಕೆ ಬಿಜೆಪಿ ಸರ್ಕಾರ



ಇದ್ದಾಗ 15 ಕೊಟ್ಟಿದ್ರೆ ಈ ಸರ್ಕಾರ ಕೇವಲ 8 ಕೋಟಿ ಮಾತ್ರ ಕೊಟ್ಟಿದೆ ಕಾಂಗ್ರೆಸ ಸರ್ಕಾರದ ಯಾವ ಯೋಜನೆ ಜನರಿಗೆ ಕೊಟ್ಟಿರುವ ಗ್ಯಾರಂಟಿ ಯೋಜನೆಗಳನ್ನು ಸರಿಯಾಗಿ ನಿರ್ವಹಿಸುತ್ತಿಲ್ಲ ಕುಲ ಕಸುಬು ಮಾಡುತ್ತಿರುವ ಕುಟುಂಬಗಳ ಕಲ್ಯಾಣಕ್ಕೆ ಮಾಡಿ ರುವ ನಿಗಮಗಳ ಬಾಗಿಲು ಮುಚ್ಚಿಸುವ ಕೆಲಸವನ್ನು ಸಿದ್ದರಾ ಮಯ್ಯ ಸರಕಾರ ಮಾಡುತ್ತಿದೆ ಎಂದು ಆರೋಪಿಸಿದರು. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ ಸರ್ಕಾರಕ್ಕೆ ಬುದ್ಧಿಕಲಿಸುವ ಕೆಲಸವನ್ನು ಜನಾ ಮಾಡಬೇಕು ಸಣ್ಣ ಸಣ್ಣ ಸಮುದಾಯಗಳು ಮೋದಿಯವರ ಪರವಾಗಿ ಇವೆ ಮೋದಿಯವರು ವಿಶೇಷ ಒತ್ತನ್ನು ನೀಡುವ ಉದ್ದೇಶದಿಂದ ವಿಶ್ವಕರ್ಮ ಯೋಜನೆಯನ್ನು ತಂದಿದ್ದಾರೆ ಜನರ ಖಜಾನೆಯನ್ನು ಬರಡು ಮಾಡಿರುವ ಕಾಂಗ್ರೆಸ ಸರ್ಕಾರ ನೊಂದವರ ಬದುಕಿಗೆ ಯಾವುದೇ ರೀತಿ ಸಹಾಯಕಾರಿ ಯೋಜನೆ ನೀಡುತ್ತಿಲ್ಲ ಮೇದಾರ ಸಮುದಾಯ,ಉಪ್ಪಾರ ಸಮುದಾಯ ಸವಿತಾ ಸಮುದಾಯ ವಿಶ್ವಕಮ ಸಮುದಾಯದ ನಿಗಮಗಳನ್ನು ನಿಷ್ಕ್ರಿಯ ಗೊಳಿಸುವ ಕೆಲಸ ಕಾಂಗ್ರೆಸ ಸರ್ಕಾರ ಮಾಡುತ್ತಿದೆ ಇದನ್ನು ಜನತೆ ಜಾಗೃತಿ ಮೂಡಿಸಬೇಕು ರೈತಾಪಿ ಜನರಿಗೆ ಕೊಳ್ಳಿ ಇಟ್ಟ ಕಾಂಗ್ರೆಸ ಸರ್ಕಾರಕ್ಕೆ ಬುದ್ದಿ ಕಲಿಸಬೇಕು ಎಲ್ಲರು ಮೋದಿಯವರ ಗೆಲುವಿಗೆ ಶ್ರಮಿಸೋಣಾ ಎಂದರು .

ಮಾಧ್ಯಮ ಗೋಷ್ಠಿಯಲ್ಲಿ ಬಿಜೆಪಿ ಬೆಳಗಾವಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ್, ಬೆಳಗಾವಿ ಮಹಾನಗರ ಜಿಲ್ಲಾ ಅಧ್ಯಕ್ಷರಾದ ಗೀತಾ ಸುತಾರ, ಭಾಗವಹಿಸಿದ್ದರು.

## ರೈತರ ಕೃಷಿ ಕಾರ್ಮಿಕರ ಸಮಸ್ಯೆಗಳ ಬಗ್ಗೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚನೆ ಮಾಡಲು ಆಗ್ರಹ



ಬೆಳಗಾವಿ: ಕೇಂದ್ರದ ಮಾಜಿ ಸಚಿವ ಅನಂತ್ ಕುಮಾರ್ ಹೆಗಡೆಯವರು ಸಂವಿಧಾನವನ್ನು ಬದಲಾಯಿಸುತ್ತೇವೆ ಎಂಬ ಹೇಳಿಕೆ ದೇಶದ ಸಂವಿಧಾನಕ್ಕೆ ಮಾಡಿದ ಅಪಚಾರವಾಗಿದ್ದು ಕೂಡಲೇ ಅವರ ವಿರುದ್ದ ಕ್ರಮ ಕೈಗೊಳಬೇಕೆಂದು ವಿವಿಧ ರೈತ ಸಂಘಟನೆಗಳ ಮುಖಂಡರು ಜಿಲ್ಲಾದಿಕಾರಿಗಳಿಗೆ ಮನವಿ ಸಲ್ಲಿಸಿದರು

ಬೆಳಗಾವಿ ಜಿಲ್ಲಾಧಿಕಾರಿಯ ಕಚೇರಿಯಲ್ಲಿ ವಿವಿಧ ರೈತ ಸಂಘಟನೆಗಳಿಂದ ಕೇಂದ್ರದ ಮಾಜಿ ಸಚಿವ ಅನಂತ್ ಕುಮಾರ್ ಹೆಗಡೆಯವರು ಸಂವಿಧಾನವನ್ನು ಬದಲಾಯಿಸುತ್ತೇವೆ ಎಂಬ ಹೇಳಿಕೆ ದೇಶದ ಸಂವಿಧಾನಕ್ಕೆ ಮಾಡಿದ ಅಪಚಾರವಾಗಿದ್ದು ಕೂಡಲೇ ಕ್ರಮ ಕೈಗೊಳಬೇಕೆಂದು ಜಿಲ್ಲಾದಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ರೈತ ಮುಖಂಡ ಸಿದ್ದಗೌಡ ಮೋದಗಿ ಮಾತನಾಡಿ ಖಾಸಗಿ ವಿಮಾ ಕಂಪನಗಳು ಹಣ

(2 ನೇ ಪುಟಕ್ಕೆ)

## ಮಾಜಿ ಸಿಎಂ ಯಡಿಯೂರಪ್ಪನವರ ಆಪ್ತ ಮರಳಿ ಬಿಜೆಪಿಗೆ




ಬೆಳಗಾವಿ: ಮಾಜಿ ಸಿಎಂ ಯಡಿಯೂರಪ್ಪನವರ ಆಪ್ತ, ಬೈಲಹೊಂಗಲ ಮತಕ್ಷೇತ್ರದ ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ ಅವರನ್ನು ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಇಂದು ಬೆಂಗಳೂರಿನ ಕಚೇರಿಯಲ್ಲಿ ಪಕ್ಷಕ್ಕೆ ಬರಮಾಡಿಕೊಂಡರು.

2013 ರ ಚುನಾವಣೆಯಲ್ಲಿ ವಿಶ್ವನಾಥ ಪಾಟೀಲ ಅವರು ಕೆಜೆಪಿ ಪಕ್ಷದಿಂದ ಆಯ್ಕೆಯಾಗಿ ನಂತರ ಬಿಜೆಪಿಯಲ್ಲಿದ್ದರು. 2018 ರ ಚುನಾವಣೆಯಲ್ಲಿ ಪಕ್ಷ ಟಿಕೇಟ ನೀಡಿದರೂ ಸಹ ಪಕ್ಷೇತರ ಅಭ್ಯರ್ಥಿಯ ಸ್ಪರ್ಧೆಯಿಂದ ಕಡಿಮೆ ಅಂತರದಿಂದ ಪರಾಭವಗೊಂಡಿದ್ದರು. ಆದರೂ ಸಹ ಕೋವಿಡದಂತಹ ಸಮಯದಲ್ಲಿ ಕ್ಷೇತ್ರದ ಮತದಾರರ ಜೊತೆಗಿದ್ದು ಅವರ ಔಷೋಧೋಪಚಾರ ಕುರಿತಂತೆ ಸಾಕಷ್ಟು ಜನಪರ ಕೆಲಸ ಮಾಡಿದ್ದರು. ಪಕ್ಷವನ್ನು ಬೂತಮಟ್ಟದಿಂದ ಗಟ್ಟಿಗೊಳಿಸುವಲ್ಲಿ ಕಾರ್ಯಕರ್ತರ ಪಡೆ ಕಟ್ಟಿ ಪಕ್ಷವನ್ನು ಬೆಳೆಸಿದ್ದರು. 2013 ರ ಚುನಾವಣೆಯಲ್ಲಿ ಪಕ್ಷ ಟಿಕೇಟ ನೀಡದ್ದರಿಂದ ಅವರ ಬೆಂಬಲಿಗರು ಪಕ್ಷದ ತಮ್ಮ ಹುದ್ದೆಗಳಿಗೆ ರಾಜಿನಾಮೆ ನೀಡಿ ವಿಶ್ವನಾಥ ಪಾಟೀಲ ಅವರನ್ನು ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕೆ ಇಳಿಸಿದ್ದರು. ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ವಿಶ್ವನಾಥ ಪಾಟೀಲ ಅವರ ಪಕ್ಷ ಸಂಘಟನೆಗೆ ಶ್ರಮಿಸಿರುವದನ್ನು ಪರಿಗಣಿಸಿ ಮತ್ತೆ ಬಿಜೆಪಿ ಪಕ್ಷಕ್ಕೆ ಬರಮಾಡಿಕೊಂಡಿದ್ದಾರೆ. ವಿಧಾನಸಭೆ ವಿರೋದ ಪಕ್ಷದ ನಾಯಕ ಆರ್. ಅಶೋಕ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಸಿ.ಟಿ.ರವಿ ಸೇರಿದಂತೆ ಪಕ್ಷದ ಪ್ರಮುಖಕರು ಇದ್ದರು.

## ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರಕ್ಕೆ ನೇಮಕ

ಕೊಪ್ಪಳ, ಮಾರ್ಚ್ 14– ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರಕ್ಕೆ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಸದಸ್ಯ ಕಾರ್ಯದರ್ಶಿಯವರನ್ನು ಎರಡು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ತಕ್ಷಣದಿಂದ ಜಾರಿಗೆ ಬರುವಂತೆ ನೇಮಿಸಿ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಆಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸರ್ಕಾರದ ಕಾರ್ಯದರ್ಶಿಗಳಾದ ಡಾ ಪ್ರಕಾಶ್ ಜಿ.ಸಿ ಅವರು ಆದೇಶ ಹೊರಡಿಸಿದ್ದಾರೆ.

ಶಕ್ತಿ, ಗೃಹ ಜ್ಯೋತಿ, ಅನ್ನಭಾಗ್ಯ, ಗೃಹಲಕ್ಷ್ಮೀ ಮತ್ತು ಯುವ ನಿಧಿ ಯೋಜನೆಗಳು ಈಗಾಗಲೇ ಜಾರಿಗೊಂಡಿದ್ದು, ಈ ಎಲ್ಲಾ ಗ್ಯಾರಂಟಿ ಯೋಜನೆಗಳ ಲಾಭಗಳನ್ನು ಅರ್ಹ ಫಲಾನುಭವಿಗಳಿಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಮೇಲ್ವಿಚಾರಣೆಗಾಗಿ ಸಾಂಸ್ಥಿಕ ಕಾರ್ಯವಿಧಾನಗಳನ್ನು ಜಾರಿಗೆ ತರಲು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರಕ್ಕೆ ನೇಮಕ ಮಾಡಲಾಗಿದೆ.

ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರಕ್ಕೆ ಅಧ್ಯಕ್ಷರನ್ನಾಗಿ ಗಂಗಾವತಿ ತಾಲ್ಲೂಕಿನ ಶ್ರೀರಾಮನಗರದ ರೆಡ್ಡಿ ಶ್ರೀನಿವಾಸ ಅವರನ್ನು ನೇಮಿಸಲಾಗಿದೆ.

ಉಪಾಧ್ಯಕ್ಷರಾಗಿ ಗಂಗಾವತಿಯ ಎಸ್.ಟಿ.ಖಾದ್ರಿ, ಹುಲಿಗಿಯ ಟಿ.ಜನಾರ್ಧನ, ತಾವರಗೇರೆಯ ಚಂದ್ರಶೇಖರ ನಾಲತವಾಡ, ಕುಕನೂರಿನ ಖಾಸಿಂಸಾಬ್ ಮರ್ದಾನ್ ಸಾಬ್ ಹಾಗೂ ಕಾರಟಗಿಯ ನಾಗರಾಜ ಅರಳಿ ಅವರು ನೇಮಕವಾಗಿದ್ದಾರೆ.

ಸದಸ್ಯರನ್ನಾಗಿ ಯಲಬುರ್ಗಾದ ಮಲ್ಲಪ್ಪ ಯಮನಪ್ಪ ಜಕಲಿ, ಮುನಿರಾಬಾದಿನ ಬಾಲಚಂದ್ರ ಸ್ಯಾಮುವೆಲ್, ಮರ್ಲಾನಹಳ್ಳಿಯ ಸೋಮನಾಥ ದೊಡ್ಡಮನಿ, ಹನುಮಸಾಗರದ ಫಾರೂಖ್ ದಲಾಯತ್, ಕಾರಟಗಿಯ ಶಕುಂತಲಾ, ಕುಷ್ಟಗಿಯ ಶಾರದಾ ಕಟ್ಟಿಮನಿ, ಹನುಮಸಾಗರದ ಮೈನುದ್ದೀನ್ ಖಾಜಿ, ಕನಕಗಿರಿಯ ಹಜರತ್ ಹುಸೇನ್, ನಿಲೋಗಲ್‌ನ ಮಲ್ಲಪ್ಪ ಭಂಡಾರಿ, ಕೊರ್ಲಹಳ್ಳಿಯ ಸುಧೀರ್ ಶಾಮಾಚಾರ, ಗಂಗಾವತಿಯ ಆನಂದ ಹಾಸಲಕರ, ಬರಗೂರಿನ ದೇವಪ್ಪ ಬಾವಿಕಟ್ಟಿ, ಬಸವನದುರ್ಗಾದ ವೆಂಕಟೇಶ್ ಬಾಬು, ಕುಕನೂರಿನ ಸಂಗಪ್ಪ ವೀರಪ್ಪ ಗುತ್ತಿ ಮತ್ತು ಕೊಪ್ಪಳದ ಅಮ್ಜದ್ ಪಟೇಲ್ ಇವರನ್ನು ನೇಮಿಸಿದೆ. ಕೊಪ್ಪಳ ಅಪರ ಜಿಲ್ಲಾಧಿಕಾರಿಗಳನ್ನು ಸದಸ್ಯ ಕಾರ್ಯದರ್ಶಿಗಳನ್ನಾಗಿ ನೇಮಕ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.